# All India Radio: Bangalore
# National Bulletin In Kannada
# 08.01.2026  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. **ಕೃತಕಬುದ್ಧಿಮತ್ತೆಯ ಪರಿಣಾಮಗಳ ಶೃಂಗಸಭೆ 2026ಕ್ಕೂ ಮುನ್ನ ಭಾರತೀಯ ಎಐ ಸ್ಟಾರ್ಟ್ ಅಪ್‌ಗಳೊಂದಿಗೆ ದುಂಡುಮೇಜಿನ ಸಭೆ ನಡೆಸಿದ ಪ್ರಧಾನಿ ನರೇಂದ್ರ ಮೋದಿ**
2. **ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಾರಿಗೆ ಸಚಿವರ ವಾರ್ಷಿಕ ಸಭೆ ನಡೆಸಿದ ಕೇಂದ್ರ ಸಚಿವ ನಿತಿನ್ ಗಡ್ಕರಿ**
3. **ನಾಳೆ ನವದೆಹಲಿಯಲ್ಲಿ ಯುವ ನಾಯಕರ ಸಂವಾದ: ಅಜಿತ್ ದೋವಲ್ ಉದ್ಘಾಟನೆ**
4. **ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್: ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಪಿ.ವಿ.ಸಿಂಧು**

***************

ಮುಂದಿನ ತಿಂಗಳು ನಡೆಯಲಿರುವ ಕೃತಕಬುದ್ಧಿಮತ್ತೆಯ ಪರಿಣಾಮಗಳ ಕುರಿತ ಶೃಂಗಸಭೆಗೆ ಪೂರ್ವಭಾವಿಯಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಭಾರತೀಯ ಕೃತಕ ಬುದ್ಧಿಮತ್ತೆ ನವೋದ್ಯಮಿಗಳ ದುಂಡುಮೇಜಿನ ಸಭೆ ನಡೆಸಿದರು. ಸಭೆಯಲ್ಲಿ 12 ನವೋದ್ಯಮಿಗಳು ಭಾಗವಹಿಸಿ ತಮ್ಮ ಕಾರ್ಯನಿರ್ವಹಣೆ ಹಾಗೂ ಚಿಂತನೆಗಳನ್ನು ಪ್ರಧಾನಿಯವರ ಜೊತೆ ಹಂಚಿಕೊಂಡರು. ಸಮಾಜದಲ್ಲಿ ಪರಿವರ್ತನೆ ತರಲು ಕೃತಕಬುದ್ಧಿ ಮತ್ತೆ ಎಷ್ಟು ಮಹತ್ವದ್ದು ಎಂಬುದನ್ನು ಮೋದಿ ಈ ಸಂದರ್ಭದಲ್ಲಿ ನವೋದ್ಯಮಿಗಳಿಗೆ ವಿವರಿಸಿದರು. ಕೃತಕ ಬುದ್ಧಿ ಮತ್ತು ನವೋದ್ಯಮಗಳು ಭಾರತದ ಭವಿಷ್ಯದ ನಿರ್ಮಾತೃಗಳಾಗಿವೆ ಎಂದ ಅವರು, ಭಾರತದಿಂದ ಅನನ್ಯವಾದಂತಹ ಕೃತಕ ಬುದ್ಧಿ ಮತ್ತೆ ಮಾದರಿಯನ್ನು ಜಗತ್ತಿಗೆ ನೀಡಬೇಕು ಎಂದು ಕರೆ ನೀಡಿದ್ದಾರೆ. ಸಭೆಯಲ್ಲಿ ಭಾರತೀಯ ಎಐ ಸ್ಟಾರ್ಟ್‌ಅಪ್‌ಗಳ ಸಿಇಒಗಳು, ಮುಖ್ಯಸ್ಥರು ಮತ್ತು ಪ್ರತಿನಿಧಿಗಳು ಭಾಗವಹಿಸಿದ್ದರು. ಸಭೆಯಲ್ಲಿ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಮತ್ತು ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಜಿತಿನ್ ಪ್ರಸಾದ್ ಉಪಸ್ಥಿತರಿದ್ದರು.

***************

ನವದೆಹಲಿಯಲ್ಲಿ ಇಂದು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಾರಿಗೆ ಸಚಿವರ ವಾರ್ಷಿಕ ಸಭೆಯ ಅಧ್ಯಕ್ಷತೆಯನ್ನು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ವಹಿಸಿದ್ದರು. ರಸ್ತೆ ಸುರಕ್ಷತೆ, ಪ್ರಯಾಣಿಕರು ಮತ್ತು ಸಾರ್ವಜನಿಕ ಅನುಕೂಲತೆ, ವ್ಯವಹಾರ ಮಾಡುವ ಸುಲಭತೆ ಮತ್ತು ಆಟೋಮೊಬೈಲ್ ನಿಯಮಗಳು ಸೇರಿದಂತೆ ಪ್ರಮುಖ ವಿಷಯಗಳ ಕುರಿತು ಸಭೆಯು ರಚನಾತ್ಮಕ ಚರ್ಚೆಗಳಿಗೆ ಸಾಕ್ಷಿಯಾಯಿತು ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ತಿಳಿಸಿದ್ದಾರೆ.

ಸಂವಿಧಾನದ ಅಡಿಯಲ್ಲಿ ಸಾರಿಗೆಯು ಸಹಭಾಗಿತ್ವ ಪಟ್ಟಿಯಲ್ಲಿರುವ ವಿಷಯವಾಗಿರುವುದರಿಂದ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ನಿಕಟ ಸಮನ್ವಯವು ಪ್ರಮುಖವಾಗಿದ್ದು, ನೀತಿ ಸಮನ್ವಯವನ್ನು ಖಚಿತಪಡಿಸಿಕೊಳ್ಳಲು, ಸಹಕಾರಿ ಒಕ್ಕೂಟವನ್ನು ಬಲಪಡಿಸಲು ಮತ್ತು ದೇಶಾದ್ಯಂತ ದಕ್ಷ, ಸುರಕ್ಷಿತ ಮತ್ತು ನಾಗರಿಕ ಕೇಂದ್ರಿತ ಸಾರಿಗೆ ಪರಿಹಾರಗಳನ್ನು ತಲುಪಿಸಲು ಇಂತಹ ನಿಯಮಿತ ಸಂವಹನಗಳು ಅತ್ಯಗತ್ಯ ಎಂದು ಅವರು ಹೇಳಿದ್ದಾರೆ.

***************

ವಿಕಸಿತ ಭಾರತ ಯುವ ನಾಯಕರ ಸಂವಾದ 2026ರ ಎರಡನೇ ಆವೃತ್ತಿಯು ನಾಳೆಯಿಂದ ಈ ತಿಂಗಳ 12ರವರೆಗೆ ನವದೆಹಲಿಯಲ್ಲಿ ನಡೆಯಲಿದೆ ಎಂದು ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯ ತಿಳಿಸಿದ್ದಾರೆ. ಶನಿವಾರ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಸಮ್ಮುಖದಲ್ಲಿ ಔಪಚಾರಿಕ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಇದೇ 12 ರಂದು ನಡೆಯುವ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

ದೇಶ ಮತ್ತು ವಿದೇಶಗಳಿಂದ 2 ಸಾವಿರದ 500ಕ್ಕೂ ಹೆಚ್ಚು ಯುವಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇಸ್ರೋ ಗಗನಯಾತ್ರಿಗಳಾದ ಗ್ರೂಪ್ ಕ್ಯಾಪ್ಟನ್ ಸುಭಾಂಶು ಶುಕ್ಲಾ ಮತ್ತು ಗ್ರೂಪ್ ಕ್ಯಾಪ್ಟನ್ ಪ್ರಶಾಂತ್ ನಾಯರ್ ಹಾಗೂ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಭಾಗವಹಿಸಿ ಸಂವಾದ ನಡೆಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

***************

ಭಾರತ ಚುನಾವಣಾ ಆಯೋಗ ಇಂದು ನವದೆಹಲಿಯಲ್ಲಿ ಮುಖ್ಯ ಚುನಾವಣಾ ಅಧಿಕಾರಿಗಳ ಸಮ್ಮೇಳನವನ್ನು ನಡೆಸಿತು.

ಇದೇ 21 ರಿಂದ 23 ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿರುವ ಭಾರತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣೆ ಸಮ್ಮೇಳನಕ್ಕೆ ಪೂರ್ವಭಾವಿಯಾಗಿ ಈ ಸಭೆ ನಡೆಯಿತು.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತ ಡಾ. ಸುಖ್ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರೊಂದಿಗೆ ಭಾಗವಹಿಸುವವರಿಗೆ ಈ ಸಮ್ಮೇಳನದ ಸೂಕ್ಷ್ಮ ವ್ಯತ್ಯಾಸಗಳು ಮತ್ತು ಅವುಗಳ ನಿರ್ದಿಷ್ಟ ಪಾತ್ರಗಳ ಬಗ್ಗೆ ಮಾಹಿತಿ ನೀಡಿದರು.

***************

53ನೇ ವಿಶ್ವ ಪುಸ್ತಕ ಮೇಳ 2026 ಇದೇ 10 ರಿಂದ 18 ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿದೆ. ಈ ಮೇಳವು ಭಾರತ ಮತ್ತು ಪ್ರಪಂಚದಾದ್ಯಂತದ ಪ್ರಕಾಶಕರು, ಲೇಖಕರು, ಓದುಗರು ಮತ್ತು ಸಾಂಸ್ಕೃತಿಕ ಧ್ವನಿಗಳನ್ನು ಒಗ್ಗೂಡಿಸುತ್ತದೆ.

ಒಂಬತ್ತು ದಿನಗಳ ಪುಸ್ತಕ ಮೇಳವು 35 ಕ್ಕೂ ಹೆಚ್ಚು ದೇಶಗಳನ್ನು ಪ್ರತಿನಿಧಿಸುವ ಸಾವಿರಕ್ಕೂ ಹೆಚ್ಚು ಪ್ರಕಾಶಕರ ಭಾಗವಹಿಸುವಿಕೆಯನ್ನು ಆಕರ್ಷಿಸುತ್ತದೆ. ಇದೇ ಮೊದಲ ಬಾರಿಗೆ ಪುಸ್ತಕ ಮೇಳಕ್ಕೆ ಪ್ರವೇಶ ಉಚಿತವಾಗಿದ್ದು, ಪುಸ್ತಕ ಮೇಳದಲ್ಲಿ ಮೀಸಲಾದ ಮಕ್ಕಳ ಮಂಟಪವೂ ಇರುತ್ತದೆ ಎಂದು ರಾಷ್ಟ್ರೀಯ ಪುಸ್ತಕ ಟ್ರಸ್ಟ್‌ನ ನಿರ್ದೇಶಕ ಯುವರಾಜ್ ಮಲಿಕ್ ಹೇಳಿದರು.

***************

ಕರ್ನಾಟಕದ ಹುಬ್ಬಳ್ಳಿಯಲ್ಲಿ ಪಕ್ಷದ ಮಹಿಳಾ ಕಾರ್ಯಕರ್ತೆಯೊಬ್ಬರ ಮೇಲೆ ಪೊಲೀಸ್ ಸಿಬ್ಬಂದಿ ಹಲ್ಲೆ ನಡೆಸುತ್ತಿದ್ದಾರೆ ಎಂಬ ಆರೋಪದ ವಿಡಿಯೋ ವೈರಲ್ ಆಗಿದ್ದು, ರಾಷ್ಟ್ರೀಯ ಮಹಿಳಾ ಆಯೋಗವು ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡಿದೆ.

ಈ ಘಟನೆಯನ್ನು ಆಯೋಗ ಖಂಡಿಸಿದ್ದು, ಈ ವಿಷಯದಲ್ಲಿ ಕರ್ನಾಟಕ ಪೊಲೀಸ್ ಮಹಾನಿರ್ದೇಶಕರಿಗೆ ಪತ್ರ ಬರೆದಿದೆ. ಈ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಲು ಮತ್ತು ನ್ಯಾಯಯುತ, ನಿಷ್ಪಕ್ಷಪಾತ ಮತ್ತು ಕಾಲಮಿತಿಯ ತನಿಖೆ ನಡೆಸಲು ಕರ್ನಾಟಕ ಡಿಜಿಪಿಗೆ ಸೂಚಿಸಲಾಗಿದೆ.

***************

ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್ ಅವರು ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳ ಕುರಿತು, ಸೇನಾ ಸಿಬ್ಬಂದಿಯ ಮಾಹಿತಿ ವ್ಯವಸ್ಥೆ ಮತ್ತು ತರಬೇತಿ ಉಪಮುಖ್ಯಸ್ಥ, ಲೆಫ್ಟಿನೆಂಟ್ ಜನರಲ್ ವಿಪುಲ್ ಶಿಂಘಲ್ ಅವರೊಂದಿಗೆ ಚರ್ಚಿಸಿದರು.

ಭಾರತವು ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಿಗೆ ಪ್ರಮುಖ ಕೊಡುಗೆ ನೀಡುತ್ತಿದ್ದು, ಜಾಗತಿಕವಾಗಿ ಗಮನಾರ್ಹ ಸಂಖ್ಯೆಯ ಮಿಲಿಟರಿ ಮತ್ತು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯವ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ.

***************

ಭವಿಷ್ಯಕ್ಕೆ ಸಿದ್ಧವಾಗಿರುವ, ಸ್ಪಂದಿಸುವ ಮತ್ತು ಪರಿಣಾಮಕಾರಿ ಸಾರ್ವಜನಿಕ ಆಡಳಿತವನ್ನು ನಿರ್ಮಿಸಲು ಕೃತಕ ಬುದ್ಧಿಮತ್ತೆಯನ್ನು ಮಾನವ ಬುದ್ಧಿಮತ್ತೆಯೊಂದಿಗೆ ಸಂಯೋಜಿಸುವ ಹೈಬ್ರಿಡ್ ಮಾದರಿಯು ನಿರ್ಣಾಯಕವಾಗಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿಗಳ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಇಂದು ಹೇಳಿದ್ದಾರೆ.

ನವದೆಹಲಿಯಲ್ಲಿ ಸಾಮರ್ಥ್ಯ ವೃದ್ಧಿಗಾಗಿ ಎಐ: ಆಡಳಿತವನ್ನು ಪರಿವರ್ತಿಸುವ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯನ್ನು ಸ್ವತಃ ಒಂದು ಅಂತ್ಯವಲ್ಲ, ಪ್ರಬಲ ಸಾಧನವಾಗಿ ನೋಡಬೇಕು ಮತ್ತು ಯಾವಾಗಲೂ ಮಾನವ ತೀರ್ಪು ಮತ್ತು ಜವಾಬ್ದಾರಿಯಿಂದ ಮಾರ್ಗದರ್ಶನ ನೀಡಬೇಕು ಎಂದು ಒತ್ತಿ ಹೇಳಿದರು.

ಸಾಮರ್ಥ್ಯ ವೃದ್ಧಿ ಪರಿಸರ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆಯ ಏಕೀಕರಣದ ಕುರಿತು, ಡಾ. ಸಿಂಗ್ ಅವರು, ಇದು ಎಐ–ಚಾಲಿತ ಸಾಧನಗಳಾದ ಎಐ ಸಾರಥಿ, ಎಐ ಟ್ಯೂಟರ್ ಮತ್ತು ಎಐ–ಆಧಾರಿತ ಸಾಮರ್ಥ್ಯ ವೃದ್ಧಿ ಯೋಜನೆಗಳನ್ನು ಒಳಗೊಂಡಿದೆ ಎಂದು ಹೇಳಿದರು. ಈ ಪರಿಕರಗಳು ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿ ವೈಯಕ್ತಿಕಗೊಳಿಸಿದ ಕಲಿಕೆಯ ಮಾರ್ಗಗಳು, ವೇಗವಾದ ಯೋಜನೆ ಮತ್ತು ಸುಧಾರಿತ ವಿತರಣೆಯನ್ನು ಸಕ್ರಿಯಗೊಳಿಸುತ್ತಿವೆ ಎಂದು ಅವರು ಹೇಳಿದರು.

***************

ಮಾದಕ ದ್ರವ್ಯಕ್ಕೆ ಸಂಬಂಧಿಸಿದ ಒಪಿಯಾಡ್ ಹಿಂತೆಗೆದುಕೊಳ್ಳುವ ಲಕ್ಷಣಗಳಿಂದ ಚೇತರಿಸಿಕೊಳ್ಳಲು ಯೋಗವು ಪ್ರಯೋಜನಕಾರಿ ಎಂದು ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿರುವ ಅಡಿಕ್ಷನ್ ಮೆಡಿಸಿನ್ ಕೇಂದ್ರವು ನಡೆಸಿದ ಸಂಶೋಧನೆಯಿಂದ ಕಂಡು ಬಂದಿದೆ.

ಪ್ರತಿಷ್ಠಿತ ಜಾಮಾ ಸೈಕಿಯಾಟ್ರಿ ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನವು ಯೋಗವು ಹಿಂತೆಗೆದುಕೊಳ್ಳುವ ಲಕ್ಷಣಗಳಿಂದ ಚೇತರಿಸಿಕೊಳ್ಳುವುದನ್ನು ನಾಟಕೀಯವಾಗಿ ವೇಗಗೊಳಿಸುತ್ತದೆ ಎಂದು ಹೇಳುತ್ತದೆ.

ಸಂಶೋಧನಾ ತಂಡದ ನೇತೃತ್ವ ವಹಿಸಿದ್ದ ಡಾ. ಹೇಮಂತ್ ಭಾರ್ಗವ್ ಅವರು, ಅಮೆರಿಕದ ಹಾರ್ವರ್ಡ್ ವೈದ್ಯಕೀಯ ಶಾಲೆಯ ಸಹಯೋಗದೊಂದಿಗೆ ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ ಮೂರ್ತಿ, ಅಡಿಕ್ಷನ್ ಮೆಡಿಸಿನ್ ಕೇಂದ್ರದ ಮುಖ್ಯಸ್ಥ ಡಾ. ಪ್ರಭಾತ್ ಚಂದ್ ಅವರ ಮೇಲ್ವಿಚಾರಣೆಯಲ್ಲಿ ಈ ಅಧ್ಯಯನವನ್ನು ನಡೆಸಲಾಗಿದೆ ಎಂದು ತಿಳಿಸಿದ್ದಾರೆ.

***************

ಮಾರ್ಗನ್ ಸ್ಟಾನ್ಲೀ ಬಿಡುಗಡೆ ಮಾಡಿದ ವರದಿಯ ಪ್ರಕಾರ, 2026ನೇ ಹಣಕಾಸು ವರ್ಷದಲ್ಲಿ ವಾಸ್ತವಿಕ ಜಿಡಿಪಿ ಬೆಳವಣಿಗೆ ಶೇಕಡಾ 7.6 ಆಗಲಿದೆ ಎಂದು ಅಂದಾಜಿಸಲಾಗಿದೆ. ಇದು ಪ್ರಸ್ತುತ ಹಣಕಾಸು ವರ್ಷದ ವಾಸ್ತವಿಕ ಜಿಡಿಪಿ ಬೆಳವಣಿಗೆಯನ್ನು ಶೇಕಡಾ 7.4 ಎಂದು ಎನ್‌ಎಸ್‌ಓ ನೀಡಿರುವ ಮೊದಲ ಮುಂಗಡ ಅಂದಾಜಿಗಿಂತ ಹೆಚ್ಚಿನದಾಗಿದೆ.

ಹಣಕಾಸು ಮತ್ತು ನಾಣ್ಯ ನೀತಿಗಳ ಸಂಯುಕ್ತ ಬೆಂಬಲ, ಖರೀದಿ ಸಾಮರ್ಥ್ಯದ ಸುಧಾರಣೆ ಹಾಗೂ ಕಾರ್ಮಿಕ ಮಾರುಕಟ್ಟೆಯ ದೃಷ್ಟಿಕೋನದಲ್ಲಿ ಕಂಡುಬರುವ ಉತ್ತಮತೆ, ಬಳಕೆಯ ಪುನಶ್ಚೇತನವು ಇನ್ನಷ್ಟು ವ್ಯಾಪಕವಾಗಲು ಸಹಕಾರಿಯಾಗಲಿದೆ ಎಂದು ವರದಿ ಹೇಳಿದೆ.

ಎನ್‌ಎಸ್‌ಓ ಅಂಕಿಅಂಶಗಳಿಗೆ ಪ್ರತಿಕ್ರಿಯೆ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ, ಭಾರತದ "ರಿಫಾರ್ಮ್ ಎಕ್ಸ್‌ಪ್ರೆಸ್" ನಿರಂತರವಾಗಿ ವೇಗ ಪಡೆಯುತ್ತಿದೆ ಎಂದು ಹೇಳಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ನೀತಿ ಆಯೋಗದ ಸದಸ್ಯ ಡಾ. ಅರವಿಂದ್ ವಿರ್ಮಾಣಿ, ಹೊರಗಿನ ಆಘಾತಗಳನ್ನು ಎದುರಿಸಲು ಭಾರತೀಯ ಆರ್ಥಿಕತೆ ಬಲವಾದ ಸ್ಥೈರ್ಯವನ್ನು ಪ್ರದರ್ಶಿಸಿದೆ ಎಂದು ಹೇಳಿದರು.

***************

ಕೌಲಾಲಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ಕ್ವಾರ್ಟರ್ ಫೈನಲ್‌ಗೆ ಭಾರತದ ಪಿ.ವಿ. ಸಿಂಧು ಲಗ್ಗೆ ಇಟ್ಟಿದ್ದಾರೆ.

ಇಂದು ಕೇವಲ 32 ನಿಮಿಷಗಳಲ್ಲಿ ಅವರು ಎಂಟನೇ ಶ್ರೇಯಾಂಕದ ಜಪಾನ್‌ನ ಟೊಮೊಕೊ ಮಿಯಾಜಾಕಿ ಅವರನ್ನು 21–8, 21–13 ಅಂತರದಲ್ಲಿ ಸೋಲಿಸಿದ್ದಾರೆ. ಸಿಂಧು ನಾಲ್ಕನೇ ಬಾರಿಗೆ ಮಲೇಷ್ಯಾ ಓಪನ್ ಪಂದ್ಯಾವಳಿಯ ಕ್ವಾರ್ಟರ್ ಫೈನಲ್‌ಗೆ ತಲುಪಿದ್ದಾರೆ.

ನಾಳೆ ಕ್ವಾರ್ಟರ್ ಫೈನಲ್‌ನಲ್ಲಿ ಸಿಂಧು ಜಪಾನ್‌ನ ಅಕಾನೆ ಯಮಗುಚಿ ಅಥವಾ ಚೀನಾದ ಗಾವೊ ಫಾಂಗ್ ಜೀ ಅವರನ್ನು ಎದುರಿಸಲಿದ್ದಾರೆ.

*******ಮುಕ್ತಾಯ********